# ನಗರಸಭಾ ಕಾರ್ಯಾಲಯ, ತುಮಕೂರು

ನಂ.ನಸತು:ತಾಂಶಾ/ಟೆಂಡರ್/ಸಿಆರ್/92/2009-10 ದಿನಾಂಕ 30-10-2009.

## ಅಲ್ಪಾವಧಿ ಟೆಂಡರ್ ಪ್ರಕಟಣೆ

ತುಮಕೂರು ನಗರ ಅಭಿವೃದ್ಧಿಗಾಗಿ ನಗರಸಭಾ ಅನುದಾನದ ಹಾಗೂ ಘನತ್ಯಾಜ್ಯ ವಸ್ತು ವಿಲೇವಾರಿ ಘಟಕದ ಅನುದಾನದ ಅಡಿಯಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿನ ಪಾರದರ್ಶಕತೆಯ ಆಧ್ಯಾದೇಶ 2000 ರಂತೆ ಸ್ಟಾಂಡರ್ಡ್ ಟೆಂಡರ್ಸ್ ಡಾಕ್ಯುಮೆಂಟ್‌ನ ಸೂಚನೆ ಮತ್ತು ನಿಬಂಧನೆಗೊಳಪಟ್ಟಂತೆ ಅರ್ಹ ದರ್ಜೆಯ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿಸಿದ ಗುತ್ತಿಗೆದಾರರುಗಳಿಂದ ನಿಗದಿಪಡಿಸಿದ ನಮೂನೆಗಳಲ್ಲಿ ಮೊಹರು ಮಾಡಲಾದ ಲಕೋಟೆಯ ಮೇಲೆ ಕಾಮಗಾರಿಯ ಹೆಸರನ್ನು ನಮೂದಿಸಿದ **ಶೇಕಡವಾರು / ಐಟಂವಾರು ಟೆಂಡರ್‌ಗಳನ್ನು** ದ್ವಿಪತ್ರಿಯಲ್ಲಿ ಪೌರಾಯುಕ್ತರು, ನಗರಸಭೆ, ತುಮಕೂರು ಇವರಿಗೆ ಸಲ್ಲಿಸಲು ಆಹ್ವಾನಿಸಲಾಗಿದೆ.

1. ಟೆಂಡರ್ ಹಾಕಲು ಇಚ್ಛಿಸುವ ಗುತ್ತಿಗೆದಾರರು ಟೆಂಡರ್ ದಾಖಲಾತಿಗಳಿಗಾಗಿ ದಿನಾಂಕ 16-11-2009 ರವರೆಗೆ ಕಛೇರಿ ವೇಳೆಯಲ್ಲಿ ಅರ್ಜಿಯನ್ನು ಕಾಮಗಾರಿಗೆ ನಿಗದಿಪಡಿಸಿದ ಅರ್ಜಿ ಶುಲ್ಕವನ್ನು ಪಾವತಿ ಮಾಡಿ ಪಾರಾಯುಕ್ತರು, ನಗರಸಭೆ, ತುಮಕೂರು ರವರಿಗೆ ಸಲ್ಲಿಸಬಹುದಾಗಿದೆ. ನಂತರ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.
2. ಟೆಂಡರ್ ಫಾರಂಗಳನ್ನು ನೀಡುವ ದಿನಾಂಕ 16-11-2009 ರವರೆಗೆ ಕಛೇರಿಯ ವೇಳೆಯಲ್ಲಿ ಅರ್ಹ ಗುತ್ತಿಗೆದಾರರಿಗೆ ನೀಡಲಾಗುವುದು.
3. ಭರ್ತಿ ಮಾಡಿದ ಫಾರಂಗಳನ್ನು ದಿನಾಂಕ 17-11-2009 ರಂದು 4.30 ಗಂಟೆಯೊಳಗಾಗಿ ಪೌರಾಯುಕ್ತರು, ನಗರಸಭೆ, ತುಮಕೂರು ರವರ ಕೊಠಡಿಯಲ್ಲಿ ಇಟ್ಟಿರುವ ಟೆಂಡರ್ ಬಾಕ್ಸ್‌ನಲ್ಲಿ ಅಥವಾ ಮಾನ್ಯ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ತುಮಕೂರು ರವರ ಕಛೇರಿಯ ಟೆಂಡರ್ ಬಾಕ್ಸ್‌ನಲ್ಲಿ ಹಾಕಬಹುದಾಗಿದೆ.
4. ಟೆಂಡರ್ ಫಾರಂಗಳನ್ನು ಸಾಧ್ಯವಾದರೆ ಅಂದೇ ಅಥವಾ ಮರುದಿನ ಕಛೇರಿ ವೇಳೆಯಲ್ಲಿ ಹಾಜರಿರುವ ಗುತ್ತಿಗೆದಾರರ ಸಮ್ಮುಖದಲ್ಲಿ ತೆರೆಯಲಾಗುವುದು

| ಕ್ರ. ಸಂ. | ಕಾಮಗಾರಿಯ ಹೆಸರು | ಅಂದಾಜು ಮೊತ್ತ(ಲಕ್ಷ ರೂ. ಗಳಲ್ಲಿ | ಇಎಂಡಿ ಮೊತ್ತ (ರೂ.ಗಳಲ್ಲಿ) | ಅರ್ಹ ದರ್ಜೆ ಗುತ್ತಿಗೆದಾರರು | ಟೆಂಡರ್ ಫಾರಂ ಬೆಲೆ+ ತೆರಿಗೆ | ಕಾಮಗಾರಿ ಪೂರ್ಣಗೊಳಿಸಲು ಕಾಲಾವಧಿ |
|---|---|---|---|---|---|---|
| | **ಘನತ್ಯಾಜ್ಯ ವಸ್ತು ವಿಲೇವಾರಿ ಘಟಕದ ಅನುದಾನ** | | | | | |
| 1 | ಮರಳೂರು ಗ್ರಾಮದ ಸರ್ವೆ ನಂ. 82/2 ರಲ್ಲಿನ ನಗರಸಭೆ ಜಾಗಕ್ಕೆ ಹೊರ ಆವರಣ ಗೋಡೆ ನಿರ್ಮಾಣ ಕಾಮಗಾರಿ. | 30.00 | 60000.00 | 1ನೇ ದರ್ಜೆ ಮತ್ತು ಮೇಲ್ಪಟ್ಟು | 3000+ ತೆರಿಗೆ | ಮಳೆಗಾಲ ಬಿಟ್ಟು ಮೂರು ತಿಂಗಳು |
| | **2009-10ನೇ ಸಾಲಿನ ನಗರಸಭಾ ಅನುದಾನ** | | | | | |
| 2 | ನಗರದ ಸಿದ್ಧಿವಿನಾಯಕ ಮಾರುಕಟ್ಟೆಯ ಹತ್ತಿರ ಹಾಳಾಗಿರುವ ಕಿರು ಸೇತುವೆ ದುರಸ್ತಿ ಕಾಮಗಾರಿ. | 6.00 | 15000.00 | 3ನೇ ದರ್ಜೆ ಮತ್ತು ಮೇಲ್ಪಟ್ಟು | 600+ ತೆರಿಗೆ | ಮಳೆಗಾಲ ಬಿಟ್ಟು ಮೂರು ತಿಂಗಳು |

### ಷರತ್ತುಗಳು

1. ಟೆಂಡರ್ ಫಾರಂ ಬೆಲೆಯನ್ನು ನಗದಾಗಿ ನಗರಸಭೆಯ ನಗದು ಶಾಖೆಯಲ್ಲಿ ಪಾವತಿಸಿ ಟೆಂಡರ್ ಫಾರಂ ಪಡೆಯಬಹುದು. ಅರ್ಜಿಯನ್ನು ಸಲ್ಲಿಸುವಾಗ ಲೋಕೋಪಯೋಗಿ ಇಲಾಖೆಯಲ್ಲಿ ಅರ್ಹ ದರ್ಜೆ ನೊಂದಾಯಿತರಾಗಿರುವ ಬಗ್ಗೆ ಪ್ರಮಾಣ ಪತ್ರವನ್ನು ಹಾಜರುಪಡಿಸಿ ದಾಖಲಾತಿ ಪುಸ್ತಕ (ಪಾಸ್ ಬುಕ್)ದಲ್ಲಿ ದಾಖಲಾತಿ ಮಾಡಿಸಿಕೊಳ್ಳಬೇಕು.
2. ಇಎಂಡಿ ಹಣವನ್ನು ಪೌರಾಯುಕ್ತರು, ನಗರಸಭೆ, ತುಮಕೂರು ಇವರ ಹೆಸರಿಗೆ ಜಮಾ ಮಾಡಬಹುದಾದಂತಹ ಡಿಡಿ / ಎಫ್‌ಡಿಆರ್‌ಗಳನ್ನು ಅಥವಾ ನಗರಸಭಾ ಕಾರ್ಯಾಲಯದಲ್ಲಿ ನಗದು ಜಮಾ ಮಾಡಿ ರಸೀದಿಯೊಂದಿಗೆ ಟೆಂಡರ್ ಜೊತೆಯಲ್ಲಿ ಸಲ್ಲಿಸಬೇಕು. ಎನ್.ಎಸ್.ಸಿ. ಗಳನ್ನು ಸ್ವೀಕರಿಸಲಾಗುವುದಿಲ್ಲ.
3. ಟೆಂಡರ್ ಫಾರಂನಲ್ಲಿ ದರವನ್ನು ಅಂಕಿ ಮತ್ತು ಅಕ್ಷರಗಳಲ್ಲಿ ಸ್ಪಷ್ಟವಾಗಿ ನಮೂದಿಸಬೇಕು.
4. ಮೇಲೆ ನಿಗಧಿಪಡಿಸಿರುವ ಯಾವುದೇ ದಿನಾಂಕಗಳು ಸರ್ಕಾರಿ ರಜಾ ದಿನಗಳೆಂದು ಘೋಷಿಸಲ್ಪಟ್ಟಲ್ಲಿ ಮುಂದಿನ ಕೆಲಸದ ದಿನವನ್ನು ಪರಿಗಣಿಸಲಾಗುವುದು.

5. ಮೇಲಿನ ಕಾಮಗಾರಿಗಳಿಗೆ ಅರ್ಜಿ ಸಲ್ಲಿಸುವ ಗುತ್ತಿಗೆದಾರರು, ಅದೇ ರೀತಿಯ ಕಾಮಗಾರಿಯನ್ನು (ಎ) ಕಾಮಗಾರಿಗೆ ನಿಗಧಿಪಡಿಸಿದ ಮೊತ್ತದಲ್ಲಿ ಶೇಕಡ 50ರಷ್ಟು ಮೊತ್ತಕ್ಕೆ ಹಿಂದಿನ ಐದು ಆರ್ಥಿಕ ವರ್ಷಗಳಲ್ಲಿನ ಯಾವುದಾದರು ಒಂದು ಆರ್ಥಿಕ ವರ್ಷದಲ್ಲಿ ಕೆಲಸ ಕೈಗೊಂಡು ತೃಪ್ತಿಕರವಾಗಿ ಪೂರೈಸಿರಬೇಕು ಇದಕ್ಕೆ ಸಂಬಂಧಿಸಿದಂತೆ ಸಕ್ಷಮ ಅಧಿಕಾರಿಗಳ ದೃಢೀಕರಣ ಪತ್ರವನ್ನು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿಯೇ ಒದಗಿಸಬೇಕು. ಮತ್ತು ಗುತ್ತಿಗೆದಾರರ ಆರ್ಥಿಕ ಸಾಮರ್ಥ್ಯದ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ದೃಢೀಕರಣವನ್ನು ಕಾಮಗಾರಿಯನ್ನು ನಿಗಧಿತ ಅವಧಿಯೊಳಗೆ ಪೂರೈಸಿಕೊಡುವ ಬಗ್ಗೆ ಕಾರ್ಯಕ್ರಮವನ್ನು ರೂಪಿಸಿ ಟೆಂಡರ್‌ನೊಂದಿಗೆ ಒದಗಿಸತಕ್ಕದ್ದು.

6. ನಿಬಂಧನೆಗಳನ್ನು ನಮೂದಿಸಿ ಸಲ್ಲಿಸುವ ಟೆಂಡರ್‌ಗಳನ್ನು ತಿರಸ್ಕರಿಸಲಾಗುವುದು.

7. ಯಾವ ಕಾರಣವನ್ನು ಸಹ ನೀಡದೆ ಯಾವುದೇ ಅಥವಾ ಎಲ್ಲಾ ಟೆಂಡರ್‌ಗಳನ್ನು ತಿರಸ್ಕರಿಸುವ ಅಧಿಕಾರವನ್ನು ನಗರಸಭೆ ಕಾಯ್ದಿರಿಸಿಕೊಂಡಿದೆ.

8. ಮೇಲಿನ ಕಾಮಗಾರಿಯಲ್ಲಿ ಏನಾದರೂ ಸೇರ್ಪಡೆ ಅಥವಾ ಮಾರ್ಪಡಿಸುವ ಹಕ್ಕನ್ನು ನಗರಸಭೆ ಕಾಯ್ದಿರಿಸಿಕೊಂಡಿದೆ.

9. ಕಾಮಗಾರಿಗೆ ಬೇಕಾದ ಎಲ್ಲಾ ಸಾಮಗ್ರಿಗಳನ್ನು ಗುತ್ತಿಗೆದಾರರೇ ಒದಗಿಸಿಕೊಳ್ಳತಕ್ಕದ್ದು.

10. ಗುತ್ತಿಗೆದಾರರು ಕೆಲಸ ನಿರ್ವಹಿಸುವ ಸಮಯದಲ್ಲಿ **ಕೆಲಸ ನಿರ್ವಹಿಸುವ ಮುನ್ನ ಕೆಲಸ ನಿರ್ವಹಿಸುವಾಗ ಮತ್ತು ಕೆಲಸ ಪೂರ್ಣಗೊಂಡಾಗ ವಿವಿಧ ಹಂತಗಳ ಫೋಟೋಗಳನ್ನು ತಮ್ಮ ಸ್ವಂತ ಖರ್ಚಿನಲ್ಲಿ ತೆಗೆಸಿ ಸಲ್ಲಿಸುವುದು.**

11. ಸರ್ಕಾರದ ಸುತ್ತೋಲೆ ಸಂಖ್ಯೆ:ನಅಇ 10:ಎಸ್‌ಎಫ್‌ಸಿ/2007 ದಿನಾಂಕ 19–1–2007ರ **ಅನ್ವಯ ಕಾಮಗಾರಿಗಳನ್ನು ಮೂರನೇ ಪಾರ್ಟಿ ತಪಾಸಣೆಗೆ ಒಳಪಟ್ಟಿರುತ್ತೆ.** ಹಾಗೂ ಕಾಮಗಾರಿ ಮುಗಿದ ನಂತರ ಬಿಲ್ ಮಾಡುವ ಸಮಯದಲ್ಲಿ **ಮೂರನೇ ಪಾರ್ಟಿಯ ಪರಿಶೀಲನಾ ವರದಿ ಪಡೆದ ನಂತರ ಬಿಲ್ ಪಾವತಿಸಲಾಗುವುದು.**

12. ಗುತ್ತಿಗೆದಾರರು ಈ ಹಿಂದೆ ಯಾವುದೇ ಕೆಲಸಗಳನ್ನು ಪೂರ್ಣಗೊಳಿಸದೆ ಮಧ್ಯದಲ್ಲಿ ತೊರೆದಿರಬಾರದು, ಹಾಗೂ ಸಕಾರಣವಿಲ್ಲದೆ ಯಾವುದೇ ಕಾಮಗಾರಿಯನ್ನು ವಿಳಂಬವಾಗಿ ಪೂರೈಸಿರಬಾರದು. ಇಂತಹ ಗುತ್ತಿಗೆದಾರರ ಅರ್ಜಿಗಳನ್ನು ನೇರವಾಗಿ ತಿರಸ್ಕರಿಸಲಾಗುವುದು. ಒಂದು ವೇಳೆ ಗುತ್ತಿಗೆ ಅವದಿ ಪೂರ್ಣಗೊಂಡಿದ್ದರೂ ಕಾಮಗಾರಿ ಪೂರ್ಣಗೊಳಿಸದಿದ್ದಲ್ಲಿ, ಕುಂಠಿತವಾಗಿದ್ದಲ್ಲಿ ಅಂತಹ ಗುತ್ತಿಗೆದಾರರ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಗುತ್ತಿಗೆದಾರರು ಟೆಂಡರ್ ಸಲ್ಲಿಸುವಾಗ ಲಕೋಟೆಯ ಮೇಲೆ ಮತ್ತು ತಮ್ಮ ಪೂರ್ಣ ವಿಳಾಸವನ್ನು ನಮೂದಿಸಬೇಕು.

13. ಗುತ್ತಿಗೆದಾರರು ಟೆಂಡರ್ ಸಲ್ಲಿಸುವಾಗ 'ಬಿ' ಷೆಡ್ಯೂಲ್‌ನಲ್ಲಿ ದರಗಳನ್ನು ನಮೂದಿಸುವಾಗ ಸ್ಪಷ್ಟವಾಗಿ ಒಂದೇ ರೀತಿಯ ಬರವಣಿಗೆಯಲ್ಲಿ ಪ್ರತಿ ಪುಟಕ್ಕೂ ಸಹಿಯೊಂದಿಗೆ ಯಾವುದೇ ರೀತಿಯ ವ್ಯತ್ಯಾಸವಾಗದಂತೆ ನಮೂದಿಸಬೇಕು. ಇಲ್ಲವಾದಲ್ಲಿ ಟೆಂಡರ್‌ಗಳನ್ನು ಪರಿಗಣಿಸಲಾಗುವುದಿಲ್ಲ.

14. ಗುತ್ತಿಗೆದಾರರು ಸ್ವಂತ ಸಾಮಗ್ರಿಗಳನ್ನು ಒದಗಿಸಿಕೊಂಡು ಇಲಾಖಾ ನಿಯಮವಳಿಗಳ ಪ್ರಕಾರ ಕೆಲಸವನ್ನು ಪೂರ್ಣಗೊಳಿಸಬೇಕು. ಮತ್ತು ಗುತ್ತಿಗೆದಾರರು ಸಾಮಗ್ರಿಗಳನ್ನು ಸ್ವಂತ ಖರ್ಚಿನಲ್ಲಿ ತಂದು ಗುಣಮಟ್ಟದ ದೃಢೀಕರಿಸಿದ ನಂತರ ಉಪಯೋಗಿಸತಕ್ಕದ್ದು.

15. **ಗುತ್ತಿಗೆದಾರರು ಟೆಂಡರ್ ಸಲ್ಲಿಸುವಾಗ ಲಕೋಟೆಯ ಮೇಲೆ ಮತ್ತು 'ಬಿ' ಷೆಡ್ಯೂಲ್‌ನಲ್ಲಿ ತಮ್ಮ ಪೂರ್ಣ ವಿಳಾಸವನ್ನು ನಮೂದಿಸಬೇಕು. ಇಲ್ಲವಾದಲ್ಲಿ** ನೇರವಾಗಿ ತಿರಸ್ಕರಿಸಲಾಗುವುದು.

16. ಟೆಂಡರ್‌ದಾರರು ಜಂಟಿಯಾಗಿ (ಇನ್ನೋರ್ವ ಗುತ್ತಿಗೆದಾರರೊಂದಿಗೆ) ಭಾಗವಹಿಸಲು ಅವಕಾಶವಿಲ್ಲ.

17. ಈ ಕಾಮಗಾರಿಗಳಿಗೆ ಕಾರ್ಯಾದೇಶದ ನೀಡಿದ ದಿನಾಂಕದಿಂದ 15 ದಿನಗಳೊಳಗಾಗಿ ಖಡ್ಡಾಯವಾಗಿ ಕಾಮಗಾರಿಗಳನ್ನು ಪ್ರಾರಂಭಿಸತಕ್ಕದ್ದು.

18. **ಕಾಮಗಾರಿ ಮುಗಿದ ದಿನಾಂಕದಿಂದ ಎರಡು ವರ್ಷಗಳವರೆಗೆ ಕಾಮಗಾರಿ ನಿರ್ವಹಣೆಯನ್ನು ಸ್ವಂತ ಖರ್ಚಿನಲ್ಲಿ ಗುತ್ತಿಗೆದಾರರೇ ನಿರ್ವಹಿಸತಕ್ಕದ್ದು.**

19. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್: www.tumkurcity.gov.in ಹಾಗೂ ನಗರಸಭೆ ತಾಂತ್ರಿಕ ಶಾಖೆಯಲ್ಲಿ ಕಛೇರಿ ವೇಳೆಯಲ್ಲಿ ಪಡೆಯಬಹುದು.

| | | |
|---|---|---|
| **ಸಹಿ/–** | **ಸಹಿ/–** | **ಸಹಿ/–** |
| **ಅಧ್ಯಕ್ಷರು** | **ಉಪಾಧ್ಯಕ್ಷರು** | **ಪೌರಾಯುಕ್ತರು** |
| **ನಗರಸಭೆ, ತುಮಕೂರು.** | **ನಗರಸಭೆ, ತುಮಕೂರು.** | **ನಗರಸಭೆ, ತುಮಕೂರು.** |

# <u>ನಗರಸಭಾ ಕಾರ್ಯಾಲಯ, ತುಮಕೂರು</u>

## *ಅಲ್ಪಾವದಿ ಟೆಂಡರ್ ಬುಲಿಟಿನ್ ನಮೂನೆ*

| ಕ್ರ. ಸಂ | *ಟೆಂಡರ್ ಹೊರಡಿಸುವ ಪ್ರಾಧಿಕಾರ* | *ಟೆಂಡರ್ ಕ್ರಮಾಂಕ ಹಾಗೂ ದಿನಾಂಕ* | *ಕಾಮಗಾರಿಯ ಹೆಸರು* | ಅಂದಾಜು ಮೊತ್ತ (ಲಕ್ಷ ರೂ.ಗಳಲ್ಲಿ) | ಇಎಂಡಿ ಮೊತ್ತ (ರೂ.ಗ ಳಲ್ಲಿ) | ಟೆಂಡರ್ ಫಾರಂ ಬೆಲೆ+ ತೆರಿಗೆ (ಹಿಂದಿ ರುಗಿಸುವು ದಿಲ್ಲ) | ಖಾಲಿ ಟೆಂಡರ್ ಫಾರಂ ಗಾಗಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ | ಖಾಲಿ ಟೆಂಡರ್ ಫಾರಂಗ ಳನ್ನು ವಿತರಿ ಸುವ ದಿನಾಂಕ | ಭರ್ತಿ ಮಾಡಿದ ಟೆಂಡರ್‌ಗ ಳನ್ನು ಸ್ವೀಕರಿ ಸುವ ಕೊನೆ ದಿನಾಂಕ | ಟೆಂಡರ್ ಸ್ವೀಕರಿಸುವ ಪ್ರಾಧಿಕಾರ |
|---|---|---|---|---|---|---|---|---|---|---|
| 1 | *2* | *3* | *4* | 5 | 6 | 7 | 8 | 9 | 10 | 11 |
| **ಘನತ್ಯಾಜ್ಯ ವಸ್ತು ವಿಲೇವಾರಿ ಘಟಕದ ಅನುದಾನ** | | | | | | | | | | |
| 1. | *ಪೌರಾಯುಕ್ತರು ನಗರಸಭೆ, ತುಮಕೂರು.* | *ನಂ.ನಸತು:ತಾಂಶಾ/ ಟೆಂಡರ್/ಸಿಆರ್/ 92/2009-10 ದಿನಾಂಕ 30-10-2009.* | ಮರಳೂರು ಗ್ರಾಮದ ಸರ್ವೆ ನಂ. 82/2 ರಲ್ಲಿನ ನಗರಸಭೆ ಜಾಗಕ್ಕೆ ಹೊರ ಆವರಣ ಗೋಡೆ ನಿರ್ಮಾಣ ಕಾಮಗಾರಿ. | 30.00 | 60000.00 | 3000+ ತೆರಿಗೆ | 31-10-09 ರಿಂದ 16-11-09 | 31-10-09 ರಿಂದ 16-11-09 | 17-11-09 | ಪೌರಾಯುಕ್ತರು ನಗರಸಭೆ, ತುಮಕೂರು. |
| **2009-10ನೇ ಸಾಲಿನ ನಗರಸಭಾ ಅನುದಾನ** | | | | | | | | | | |
| 2. | --''-- | --''-- | ನಗರದ ಸಿದ್ದಿವಿನಾಯಕ ಮಾರುಕಟ್ಟೆಯ ಹತ್ತಿರ ಹಾಳಾಗಿರುವ ಕಿರು ಸೇತುವೆ ದುರಸ್ತಿ ಕಾಮಗಾರಿ. | 6.00 | 15000.00 | 600+ ತೆರಿಗೆ | 31-10-09 ರಿಂದ 16-11-09 | 31-10-09 ರಿಂದ 16-11-09 | 17-11-09 | ಪೌರಾಯುಕ್ತರು ನಗರಸಭೆ, ತುಮಕೂರು. |

**ಪೌರಾಯುಕ್ತರು**

ನಗರಸಭೆ, ತುಮಕೂರು.